# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:- ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ, ಉಡುಪಿ, ಇವರಿಗೆ, ಉಡುಪಿ ನಗರಸಭೆಯ ವ್ಯಾಪ್ತಿಯಲ್ಲಿ ಸಂಚಾರಿ bio-digester ಶೌಚಾಲಯ ಅಳವಡಿಸುವ ಯೋಜನೆಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.**

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 92 ಇಆಸು 2009, ದಿನಾಂಕ:08.07.2010.
2) ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ, ಉಡುಪಿ, ಇವರ ಪತ್ರ ಸಂಖ್ಯೆ: ಐಎನ್‌ವಿಸಿಆರ್:2/2017(18093), ದಿನಾಂಕ:21.10.2017.
3) ದಿನಾಂಕ: 22.03.2018 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಚಾಲೆಂಜ್ ಫಂಡ್ ಯೋಜನೆಯ ಬಗ್ಗೆ ನಡೆದ ಸಭಾ ನಡವಳಿಗಳು.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ದಿನಾಂಕ: 08.07.2010ರ ಸರ್ಕಾರದ ಆದೇಶದಲ್ಲಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಚಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಲಾಗಿದೆ. ಈ ಯೋಜನೆಯಲ್ಲಿ ಗುಣಮಟ್ಟದ ಗುರಿಗಳನ್ನು ಸಾಧಿಸಲು ಪ್ರಯೋಗಾತ್ಮಕ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಅನುದಾನವನ್ನು ಬಿಡುಗಡೆ ಮಾಡಲು ಉದ್ದೇಶಿಸಲಾಗಿದೆ. ಈ ಯೋಜನೆಗೆ ಸರ್ಕಾರವು 2017-18ನೇ ಸಾಲಿನಲ್ಲಿ ರೂ.600.00 ಲಕ್ಷಗಳನ್ನು ಮೀಸಲಿರಿಸಿದೆ.

ಓದಲಾದ (2)ರ ದಿನಾಂಕ: 08.11.2017ರ ಪ್ರಸ್ತಾವನೆಯಲ್ಲಿ, ಜಿಲ್ಲಾಧಿಕಾರಿ, ಉಡುಪಿ, ಜಿಲ್ಲೆ, ಉಡುಪಿ, ಇವರು ಉಡುಪಿ ಜಿಲ್ಲೆಯ ಉಡುಪಿ ನಗರಸಭೆಯ ವ್ಯಾಪ್ತಿಯ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸಾರ್ವಜನಿಕರ ಉಪಯೋಗಕ್ಕಾಗಿ Bio-digester Toilets ನಿರ್ಮಾಣ ಮಾಡಲು, ಒಂದು ಘಟಕಕ್ಕೆ ಸುಮಾರು ರೂ. 13,75,000 ವೆಚ್ಚವಾಗಲಿದ್ದು, ಇಂತಹ ಮೂರು ಘಟಕಗಳನ್ನು ಮತ್ತು ಸಾಗಣಿಕೆ, ತೆರಿಗೆ ಇತ್ಯಾದಿ ಸೇರಿ ಸುಮಾರು ರೂ. **50,00,000** ಗಳ ಅನುದಾನವನ್ನು ಒದಗಿಸಲು ಕೋರಿರುತ್ತಾರೆ.

ಓದಲಾದ (3)ರಲ್ಲಿ, ಚಾಲೆಂಜ್ ಫಂಡ್ ಯೋಜನೆ ಜಾರಿಗೆ ಸಂಬಂಧಪಟ್ಟಂತೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 22.03.2018ರಂದು ನಡೆದ ಸಭೆಯಲ್ಲಿ, ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಹಾಗೂ ಸಮಿತಿಯ ಸದಸ್ಯರು ಪರಿಶೀಲಿಸಿ, ಸದರಿ ಪ್ರಸ್ತಾವನೆಯ ಬಗ್ಗೆ ಚರ್ಚಿಸಲ್ಪಟ್ಟು, ಹೆಚ್ಚುವರಿ ಮಾಹಿತಿ ಪಡೆದು, ಸದರಿ ಯೋಜನೆಗೆ, ಬಳಕೆಯಲ್ಲಿಲ್ಲದ ಹಳೆಯ ಬಸ್‌ಗಳನ್ನು ಮಾರ್ಪಡಿಸಿ ಉಪಯೋಗಿಸಬಹುದೆಂದು ತಿಳಿಸಿ, ಪ್ರಸ್ತಾವನೆಯಲ್ಲಿ ವಿವರಿಸಿರುವ

ವಿಧಾನ ಅಥವಾ ಬಸ್‌ಗಳ ಬಳಕೆ ಇವೆರಡರಲ್ಲಿ ಯಾವುದರ ವೆಚ್ಚ ಕಡಿಮೆ ಮತ್ತು ಸುಲಭ ನಿರ್ವಹಣೆಯೋ ಅದನ್ನು ಅಳವಡಿಸಿಕೊಳ್ಳಬಹುದೆಂದು ತಿಳಿಸಿ, ಸಂಚಾರಿ bio-digester ಶೌಚಾಲಯಗಳನ್ನು ಸ್ಥಾಪಿಸುವ ಯೋಜನೆಯು ಉತ್ತಮವಾದುದೆಂದು ಪರಿಗಣಿಸಿ ಸದರಿ ಯೋಜನೆಗೆ ರೂ.**50.00** ಲಕ್ಷಗಳ ಅನುದಾನವನ್ನು ಮಂಜೂರು ಮಾಡಲು ಸಭೆಯಲ್ಲಿ ಒಪ್ಪಲಾಯಿತು.

ಅದರಂತೆ, ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ:120:ಇಆಸು:2017**
**ಬೆಂಗಳೂರು, ದಿನಾಂಕ: 26.03.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಸರ್ಕಾರದ ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ, ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ, ಉಡುಪಿ. ಇವರಿಗೆ, ಉಡುಪಿ ನಗರಸಭೆಯ ವ್ಯಾಪ್ತಿಯಲ್ಲಿ ಶ್ರಮಿಕ ವರ್ಗದ ವಲಸೆ ಕಾರ್ಮಿಕರಿಗೆ ಮತ್ತು ಸಾರ್ವಜನಿಕರ ಉಪಯೋಗಕ್ಕಾಗಿ ಮೂರು ಸಂಚಾರಿ Bio-digester ಶೌಚಾಲಯ ಸ್ಥಾಪಿಸಲು, ಹಾಗೂ ತೆರಿಗೆ, ಸಾಗಾಣಿಕೆ ವೆಚ್ಚ ಸೇರಿ ರೂ.**50,00,000**/-ಗಳ (ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

ಈ ಅನುದಾನವನ್ನು ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ, ಉಡುಪಿ, ಇವರ ಕಾರ್ಯಾಲಯದ ಡಿ.ಡಿ.ಓ ಸಂಖ್ಯೆ: **2000RD0002** ಗೆ ಬಿಡುಗಡೆ ಮಾಡಲಾಗಿದೆ. ಈ ಅನುದಾನವನ್ನು ಖಜಾನೆಯಿಂದ ಸೆಳೆದು ಜಿಲ್ಲಾಧಿಕಾರಿಯವರ ಪಿಡಿ ಖಾತೆಯಲ್ಲಿ ಇರಿಸಿ ಅಗತ್ಯತೆಗೆ ಅನುಗುಣವಾಗಿ ಖರ್ಚು ಹಾಕತಕ್ಕದ್ದು ಹಾಗೂ ನಿಗದಿತ ಅವಧಿಯಲ್ಲಿ ಯೋಜನೆಯನ್ನು ಸಮರ್ಪಕವಾಗಿ ನಿರ್ವಹಿಸಿ ಅನುದಾನ ಬಳಕೆಯ ಪ್ರಮಾಣ ಪತ್ರವನ್ನು ಯೋಜನೆ ನಿರ್ವಹಿಸುವ ಅಧಿಕಾರಿ ಸಕಾಲದಲ್ಲಿ ತಪ್ಪದೇ ಒದಗಿಸುವುದು. ತಪ್ಪಿದಲ್ಲಿ, ಬಿಡುಗಡೆಯಾದ ಅನುದಾನವನ್ನು ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2052–00–090–0–25–059 (ಯೋಜನೇತರ) ಆಡಳಿತ ಸುಧಾರಣೆ ಸವಾಲು ನಿಧಿ–ಅಡಿಯಲ್ಲಿ ಭರಿಸತಕ್ಕದ್ದು.

ಈ ಯೋಜನೆಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ (ಕೆ.ಟಿ.ಪಿ.ಪಿ)ರನ್ವಯ ಕಾರ್ಯ ನಿರ್ವಹಿಸುವಂತೆ ಆದೇಶಿಸಿದೆ. ಯೋಜನೆ ಪೂರ್ಣಗೊಂಡ ನಂತರ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಿಂದ ಮೌಲ್ಯಮಾಪನ ಮಾಡಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 01 ಟಿಎಫ್‌ಪಿ 2017, ದಿನಾಂಕ: 05.04.2017 ಮತ್ತು ಆಇ 05 ಟಿಎಫ್‌ಪಿ 2017, ದಿನಾಂಕ: 01.01.2018ರಲ್ಲಿ ಆಡಳಿತ ಇಲಾಖಾ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

ಸುಜಾತ ಹೆಚ್.ಎಸ್

**(ಸುಜಾತ ಹೆಚ್.ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ತರಬೇತಿ)

**ಪ್ರತಿ:**

1. ಮಹಾಲೇಖಪಾಲರು ಕರ್ನಾಟಕ, (ಆಡಿಟ್ 1 ಮತ್ತು 2) (ಲೆಕ್ಕಪತ್ರ 1 ಮತ್ತು 2), ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ, ಉಡುಪಿ..
5. ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಶಾಂತಿನಗರ, ಬೆಂಗಳೂರು-560027
5. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.